ಸದನದಲ್ಲಿ ಉತ್ತರಿಸುವ ಪ್ರಶ್ನೆ

ಕರ್ನಾಟಕ ವಿಧಾನ ಪರಿಷತ್ತು

ನೂರ ನಲವತ್ತೊಂದನೆಯ ಅಧಿವೇಶನ

ಸೋಮವಾರ, ದಿನಾಂಕ : 21 ನೇ ಸೆಪ್ಟೆಂಬರ್, 2020

ಕಟ್ಟಡ ಕಾರ್ಮಿಕರ ಮಕ್ಕಳ ಪಾಲನೆಗಾಗಿ ಸಂಚಾರಿ ಶಿಶುಪಾಲನಾ ಕೇಂದ್ರಗಳನ್ನು ಸ್ಥಾಪಿಸುವ ಬಗ್ಗೆ

ಶ್ರೀ ನಸೀರ್ ಅಹ್ಮದ್(ವಿಧಾನಸಭೆಯಿಂದ ಚುನಾಯಿತರಾದವರು) -

02 (130) ಕಾರ್ಮಿಕ ಹಾಗೂ ಸಕ್ಕರೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ -

(ಅ) 2020-21ನೇ ಸಾಲಿನ ಆಯವ್ಯಯದಲ್ಲಿ ಘೋಷಣೆ ಮಾಡಿದಂತೆ ರಾಜ್ಯಾದ್ಯಂತ ಕಟ್ಟಡ ಕಾರ್ಮಿಕರ 6 ವರ್ಷದೊಳಗಿನ ಮಕ್ಕಳ ಪಾಲನೆ ಮಾಡಲು ಕಟ್ಟಡ ನಿರ್ಮಾಣ ಸ್ಥಳಗಳಲ್ಲಿ 10 ಸಂಚಾರಿ ಶಿಶುಪಾಲನಾ ಕೇಂದ್ರಗಳನ್ನು ಒಳಗೊಂಡಂತೆ ಒಟ್ಟು 110 ಕಿತ್ತೂರು ರಾಣಿ ಚೆನ್ನಮ್ಮ ಶಿಶುಪಾಲನಾ ಕೇಂದ್ರಗಳನ್ನು ಸ್ಥಾಪಿಸಲಾಗಿದೆಯೇ;

(ಆ) ಸ್ಥಾಪಿಸಿದ್ದಲ್ಲಿ, ಇದುವರೆಗೂ ಎಷ್ಟು ಜನ ಫಲಾನುಭವಿಗಳು ಇದರ ಪ್ರಯೋಜನ ಪಡೆದುಕೊಂಡಿದ್ದಾರೆ; (ಸಂಪೂರ್ಣ ವಿವರ ನೀಡುವುದು)

(ಇ) ಯೋಜನೆ ಇನ್ನು ಪ್ರಾರಂಭಿಸದೇ ಇದ್ದಲ್ಲಿ ಯಾವಾಗ ಆರಂಭಿಸಲಾಗುವುದು; ವಿಳಂಬಕ್ಕೆ ಕಾರಣಗಳೇನು? (ಈ ಬಗ್ಗೆ ಜಿಲ್ಲಾವಾರು ಮಾಹಿತಿ ಒದಗಿಸುವುದು)